Akashvani: Bangalore
National News In Kannada
09.11.2025 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
***************

ಮುಖ್ಯಾಂಶಗಳು

೧. ಎರಡು ರಾಷ್ಟ್ರಗಳ ಪ್ರವಾಸದ ಭಾಗವಾಗಿ ಅಂಗೋಲಾ ತಲುಪಿದ ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಉತ್ತರಾಖಂಡಕ್ಕಿಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ೮ ಸಾವಿರ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

೩. ಉಪರಾಷ್ಟ್ರಪತಿ ಸಿ.ಪಿ. ರಾಧಕೃಷ್ಣನ್ ಇಂದು ಕರ್ನಾಟಕಕ್ಕೆ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ

೪. ಬಿಹಾರ ವಿಧಾನಸಭಾ ಚುನಾವಣೆ; ಎರಡನೇ ಹಂತದ ಪ್ರಚಾರಕ್ಕೆ ಇಂದು ತೆರೆ

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಎರಡು ರಾಷ್ಟ್ರಗಳ ಭೇಟಿಯ ಭಾಗವಾಗಿ ಅಂಗೋಲಾ ತಲುಪಲಿದ್ದಾರೆ. ಭಾರತದ ರಾಷ್ಟ್ರಪತಿಯೊಬ್ಬರು ಅಂಗೋಲಾ ಮತ್ತು ಬೋಟ್ಸ್ವಾನಾಗೆ ಭೇಟಿ ನೀಡುತ್ತಿರುವುದು ಇದೇ ಮೊದಲು. ಈ ಭೇಟಿಯು ಭಾರತ, ಆಫ್ರಿಕಾದೊಂದಿಗಿನ ತನ್ನ ಸಂಬಂಧವನ್ನು ಗಾಢವಾಗಿಸಲು ಮತ್ತು ಜಾಗತಿಕ ದಕ್ಷಿಣದ ರಾಷ್ಟ್ರಗಳೊಂದಿಗೆ ಪಾಲುದಾರಿಕೆಯನ್ನು ಬಲಪಡಿಸಲು ನೀಡುವ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತದೆ. ತಮ್ಮ ಭೇಟಿಯ ಮೊದಲ ಚರಣದಲ್ಲಿ, ರಾಷ್ಟ್ರಪತಿಯವರು, ಅಂಗೋಲಾ ಅಧ್ಯಕ್ಷ ಜೊವೊ ಲೌರೆಂಕೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ನಂತರ ಅವರು ಅಂಗೋಲಾ ಸಂಸತ್ತನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಮತ್ತು ಅಂಗೋಲಾದ ಸ್ವಾತಂತ್ರ್ಯದ ೫೦ ನೇ ವಾರ್ಷಿಕೋತ್ಸವದ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ತಿಂಗಳ ೧೧ ರಿಂದ ೧೩ ರವರೆಗೆ ರಾಷ್ಟ್ರಪತಿಯವರು ಬೋಟ್ಸ್ವಾನಾಗೆ ಭೇಟಿ ನೀಡಲ್ಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಬೋಟ್ಸ್ವಾನಾ ಅಧ್ಯಕ್ಷೆ ಡುಮಾ ಬೊಕೊ ನಡುವೆ ದ್ವಿಪಕ್ಷೀಯ ಮಾತುಕತೆ ನಡೆಯಲಿದೆ. ಅವರು ಬೋಟ್ಸ್ವಾನಾ ರಾಷ್ಟ್ರೀಯ ಸಂಸತ್ ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಐತಿಹಾಸಿಕ ಮತ್ತು ಸಾಂಸ್ಕೃತಿಕ ಪ್ರಾಮುಖ್ಯತೆಯ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿಗಳು ಎರಡೂ ದೇಶಗಳ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಹನ ನಡೆಸಲಿದ್ದಾರೆ.

***************

ಇದೇ ವರ್ಷ ಡಿಸೆಂಬರ್ ಒಂದರಿಂದ ಡಿಸೆಂಬರ್ ೧೯ರವರೆಗೆ ಸಂಸತ್‌ನ ಚಳಿಗಾಲದ ಅಧಿವೇಶನ ನಡೆಯಲಿದೆ.

ಅಧಿವೇಶನ ಕರೆಯುವ ಸರ್ಕಾರದ ಪ್ರಸ್ತಾವನೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದಿಸಿದ್ದಾರೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಅವರು ಪ್ರಜಾಪ್ರಭುತ್ವವನ್ನು ಬಲಪಡಿಸುವ ಮತ್ತು ದೇಶವಾಸಿಗಳ ಆಕಾಂಕ್ಷೆಗಳನ್ನು ಪೂರೈಸುವ ರಚನಾತ್ಮಕ ಮತ್ತು ಅರ್ಥಪೂರ್ಣ ಅಧಿವೇಶನವನ್ನು ಸರ್ಕಾರ ಎದುರು ನೋಡುತ್ತಿದೆ ಎಂದು ಸಚಿವ ಕಿರಣ್ ರಿಜಿಜು ಹೇಳಿದ್ದಾರೆ.

***************

ಉತ್ತರಾಖಂಡ ರಾಜ್ಯ ರಚನೆಯ ಬೆಳ್ಳಿ ಮಹೋತ್ಸವದ ಆಚರಣೆಯಲ್ಲಿ ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಇಂದು ಡೆಹ್ರಾಡೂನ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಪ್ರಧಾನಿಯವರು, ಬೆಳ್ಳಿ ಮಹೋತ್ಸವ ಸ್ಮರಣಾರ್ಥ ಅಂಚೆ ಚೀಟಿಯನ್ನು ಬಿಡುಗಡೆ ಮಾಡಲಿದ್ದಾರೆ ಮತ್ತು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿಯವರು, ೯೩೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳ ಉದ್ಘಾಟನೆ ಮತ್ತು ೭ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳ ಶಂಕುಸ್ಥಾಪನೆ ಸೇರಿದಂತೆ ೮ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅವರು ಚಾಲನೆ ನೀಡಲಿದ್ದಾರೆ. ಈ ಯೋಜನೆಗಳು ಕುಡಿಯುವ ನೀರು, ನೀರಾವರಿ, ತಾಂತ್ರಿಕ ಶಿಕ್ಷಣ, ಇಂಧನ, ನಗರಾಭಿವೃದ್ಧಿ, ಕ್ರೀಡೆ ಮತ್ತು ಕೌಶಲ್ಯ ಅಭಿವೃದ್ಧಿ ಸೇರಿದಂತೆ ಹಲವಾರು ಪ್ರಮುಖ ಕ್ಷೇತ್ರಗಳನ್ನು ಒಳಗೊಂಡಿದೆ. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿಯಲ್ಲಿ ೨೮ ಸಾವಿರಕ್ಕೂ ಹೆಚ್ಚು ರೈತರಿಗೆ ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ೬೨ ಕೋಟಿ ರೂಪಾಯಿಗಳ ಮೊತ್ತವನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆ ಮಾಡಲಿದ್ದಾರೆ.

***************

ಉಪರಾಷ್ಟ್ರಪತಿ ರಾಧಾಕೃಷ್ಣನ್ ಇಂದು ಕರ್ನಾಟಕಕ್ಕೆ ಭೇಟಿ ನೀಡಲಿದ್ದಾರೆ. ಉಪರಾಷ್ಟ್ರಪತಿ ಆದ ನಂತರ ಇದು ಅವರ ಮೊದಲ ರಾಜ್ಯ ಪ್ರವಾಸವಾಗಿದೆ. ಅವರು, ಶ್ರವಣಬೆಳಗೊಳ, ಮಂಡ್ಯದ ಮೇಲುಕೋಟೆ ಹಾಗೂ ಮೈಸೂರಿನ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಶ್ರವಣಬೆಳಗೊಳದಲ್ಲಿ ಆಚಾರ್ಯ ಶಾಂತಿ ಸಾಗರ್ ಮಹಾರಾಜರ ವಿಗ್ರಹ ಪ್ರತಿಷ್ಠಾಪನಾ ಸಮಾರಂಭ ಮತ್ತು ನಾಲ್ಕನೇ ಬೆಟ್ಟದ ನಾಮಕರಣ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮೈಸೂರಿನಲ್ಲಿ ಚಾಮುಂಡಿ ಬೆಟ್ಟ ಹಾಗೂ ಸುತ್ತೂರು ಮಠಕ್ಕೂ ಉಪರಾಷ್ಟ್ರಪತಿ ಅವರು ಭೇಟಿ ನೀಡಲಿದ್ದಾರೆ.

***************

ಬಿಹಾರ ವಿಧಾನಸಭಾ ಚುನಾವಣೆಯು ನಿರ್ಣಾಯಕ ಹಂತ ತಲುಪಿದ್ದು, ಎರಡನೇ ಮತ್ತು ಅಂತಿಮ ಹಂತದ ಪ್ರಚಾರ ಇಂದು ಸಂಜೆ ೬ ಗಂಟೆಗೆ ಮುಕ್ತಾಯಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ಎನ್‌ಡಿಎ ಮತ್ತು ಮಹಾಘಟಬಂಧನ್ ಮೈತ್ರಿಕೂಟದ ನಾಯಕರು ಮತದಾರರನ್ನು ಸೆಳೆಯಲು ಅಂತಿಮ ಕಸರತ್ತು ನಡೆಸುತ್ತಿದ್ದಾರೆ. ಎರಡನೇ ಹಂತದಲ್ಲಿ ೧೨೨ ವಿಧಾನಸಭಾ ಕ್ಷೇತ್ರಗಳಿಗೆ ಇದೇ ೧೧ರಂದು ಮತದಾನ ನಡೆಯಲಿದೆ. ಚುನಾವಣಾ ಆಯೋಗದ ಮಾಹಿತಿಯ ಪ್ರಕಾರ, ಒಟ್ಟು ಒಂದು ಸಾವಿರದ ೩೦೨ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಹಂತದಲ್ಲಿ ೩೭ ದಶಲಕ್ಷ ಮತದಾರರು ತಮ್ಮ ಮತ ಚಲಾಯಿಸಲು ಅರ್ಹರಾಗಿದ್ದಾರೆ. ನವೆಂಬರ್ ೬ ರಂದು ನಡೆದ ಮೊದಲ ಹಂತದ ಮತದಾನದಲ್ಲಿ ಶೇಕಡ ೬೪.೬ ರಷ್ಟು ಮತದಾನ ದಾಖಲಾಗಿದೆ.

***************

ಸಮಾಜದಲ್ಲಿನ ವಿಭಜನೆಗಳನ್ನು ಕೊನೆಗೊಳಿಸಲು ಸಂವಾದವನ್ನು ಪ್ರಾರಂಭಿಸುವುದಾಗಿ ಆರ್‌ಎಸ್‌ಎಸ್ ಸರಸಂಘಚಾಲಕ ಮೋಹನ್ ಭಾಗವತ್ ಹೇಳಿದ್ದಾರೆ. ಬೆಂಗಳೂರಿನಲ್ಲಿ '೧೦೦ ವರ್ಷಗಳ ಸಂಘದ ಪ್ರಯಾಣ - ಹೊಸ ದಿಗಂತಗಳು' ಎಂಬ ಉಪನ್ಯಾಸ ಸರಣಿಯ ಭಾಗವಾಗಿ ಮಾತನಾಡಿದ ಅವರು, ಸಮಾಜದಲ್ಲಿನ ವಿಭಜನೆಗಳನ್ನು ನಿವಾರಿಸುವ ಮೂಲಕ ಸಾಮಾಜಿಕ ಸಾಮರಸ್ಯಕ್ಕಾಗಿ ಕೆಲಸ ಮಾಡುವುದಾಗಿ ಹೇಳಿದರು. ೧೮೫೭ ರ ಮೊದಲ ಸ್ವಾತಂತ್ರ್ಯ ಸಂಗ್ರಾಮದ ಸಮಯದಲ್ಲಿ, ಹಿಂದೂಗಳು ಮತ್ತು ಮುಸ್ಲಿಮರು ಇಬ್ಬರೂ ಬ್ರಿಟಿಷ್ ಆಳ್ವಿಕೆಯಿಂದ ಸ್ವಾತಂತ್ರ್ಯಕ್ಕಾಗಿ ಹೋರಾಡಲು ಒಗ್ಗೂಡಿದರು. ಬ್ರಿಟಿಷರು ಈ ಏಕತೆಯನ್ನು ತಮ್ಮ ಆಡಳಿತಕ್ಕೆ ಬೆದರಿಕೆ ಎಂದು ಅರಿತುಕೊಂಡರು ಮತ್ತು ಭಾರತೀಯ ಸಮಾಜದಲ್ಲಿನ ವಿಭಜನೆಯನ್ನು ವಿಸ್ತರಿಸಲು ಪ್ರಾರಂಭಿಸಿದರು ಎಂದರು. ಅಂತಹ ವಿಭಜನೆಯನ್ನು ಕೊನೆಗೊಳಿಸಲು ಆರ್‌ಎಸ್‌ಎಸ್ ಒಂದು ಜನಸಂಪರ್ಕ ಕಾರ್ಯಕ್ರಮವನ್ನು ಪ್ರಾರಂಭಿಸುತ್ತದೆ ಎಂದು ಮೋಹನ್ ಭಾಗವತ್ ತಿಳಿಸಿದರು. ಸದ್ಭಾವನಾ ಕಾರ್ಯದ ಭಾಗವಾಗಿ ಸಂಘಟನೆಯು ಬ್ಲಾಕ್ ಮಟ್ಟದಲ್ಲಿ ಸಮುದಾಯದ ನಾಯಕರು ಮತ್ತು ಧಾರ್ಮಿಕ ಪಂಗಡಗಳ ಮುಖ್ಯಸ್ಥರನ್ನು ತಲುಪುತ್ತದೆ. ಇದು ಸಮುದಾಯವನ್ನು ಉನ್ನತೀಕರಿಸುವುದು ಮತ್ತು ಸಮಸ್ಯೆಗಳು ಹಾಗೂ ಸಂಘರ್ಷಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ ಎಂದ ಅವರು, ಸಾಮಾಜಿಕ ಸಾಮರಸ್ಯಕ್ಕಾಗಿ ತಮ್ಮ ಸಾಮರ್ಥ್ಯದಲ್ಲಿ ಕೊಡುಗೆ ನೀಡುವಂತೆ ಮೋಹನ್ ಭಾಗವತ್ ನಾಗರಿಕ ಸಮಾಜಕ್ಕೆ ಕರೆ ನೀಡಿದರು.

***************

ಪ್ರಧಾನಿ ನರೇಂದ್ರ ಮೋದಿ ಈ ತಿಂಗಳ ೧೧ ರಿಂದ ಎರಡು ದಿನಗಳ ಕಾಲ ಭೂತಾನ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಪ್ರಧಾನಿ ಮೋದಿ ಮತ್ತು ಭೂತಾನ್ ರಾಜ ಜಿಗ್ಮೆ ಖೇಸರ್ ನಮ್ಗ್ಯೆಲ್ ವಾಂಗ್‌ಚುಕ್, ಒಂದು ಸಾವಿರ ಇಪ್ಪತ್ತು ಮೆಗಾವ್ಯಾಟ್ ಸಾಮರ್ಥ್ಯದ ಪುನತ್ಸಂಗ್‌ಚು ಜಲವಿದ್ಯುತ್ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಭೂತಾನ್ ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ಭೂತಾನ್‌ನ ನಾಲ್ಕನೇ ರಾಜ ಜಿಗ್ಮೆ ಸಿಂಗ್ಯೆ ವಾಂಗ್‌ಚುಕ್ ಅವರ ೭೦ನೇ ಜನ್ಮ ವಾರ್ಷಿಕೋತ್ಸವಕ್ಕೆ ಮೀಸಲಾಗಿರುವ ಆಚರಣೆಗಳಲ್ಲಿ ಪ್ರಧಾನಿ ಮೋದಿ ಭಾಗವಹಿಸಲಿದ್ದಾರೆ. ನಂತರ ಭೂತಾನ್ ಪ್ರಧಾನಿ ತ್ಶೆರಿಂಗ್ ಟೋಬ್ಗೇ ಅವರನ್ನು ಭೇಟಿ ಮಾಡಲಿದ್ದಾರೆ. ಇದೇ ವೇಳೆ ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿ ಭಾಗವಹಿಸಲಿದ್ದಾರೆ ಮತ್ತು ಥಿಂಪುವಿನ ತಾಶಿಚೋಡ್‌ಜಾಂಗ್‌ನಲ್ಲಿ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಭೇಟಿಯು ಭಾರತ-ಭೂತಾನ್ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ವರ್ಧಿಸುವ ಮತ್ತು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಲು ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ವ್ಯಾಪಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಎರಡೂ ಕಡೆಯವರಿಗೆ ಅವಕಾಶವನ್ನು ಒದಗಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಾಳೆ ನವದೆಹಲಿಯಲ್ಲಿ ರಕ್ಷಣಾ ಕ್ಷೇತ್ರದಲ್ಲಿ ಸಾರ್ವಜನಿಕ ವಲಯದ ಉದ್ಯಮಗಳ ವಾರ್ಷಿಕ ಕಾರ್ಯಕ್ಷಮತೆಯನ್ನು ಪರಿಶೀಲಿಸಲಿದ್ದಾರೆ. ಈ ಸಂದರ್ಭದಲ್ಲಿ, ಕಳೆದ ಹತ್ತು ವರ್ಷಗಳಲ್ಲಿ ಕೈಗೊಳ್ಳಲಾದ ಸಂಶೋಧನೆ ಮತ್ತು ಅಭಿವೃದ್ಧಿ ಯೋಜನೆಗಳ ಪ್ರಗತಿ ಮತ್ತು ಮುಂದಿನ ಐದು ವರ್ಷಗಳ ಯೋಜನೆಯ ಕೈಪಿಡಿಯನ್ನು ಬಿಡುಗಡೆ ಮಾಡಲಾಗುವುದು. ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನ ಹೊಸ ಸಂಶೋಧನೆ ಮತ್ತು ಅಭಿವೃದ್ಧಿ ಕೈಪಿಡಿಯನ್ನು ಸಹ ಬಿಡುಗಡೆ ಮಾಡಲಾಗುವುದು. 'ಸ್ವಯಂ' ಎಂಬ ಶೀರ್ಷಿಕೆಯ ನವೀಕರಿಸಬಹುದಾದ ಇಂಧನದ ಕುರಿತಾದ ವರದಿಯನ್ನು ಸಹ ಸಚಿವರು ಬಿಡುಗಡೆ ಮಾಡಲಿದ್ದಾರೆ. ಕಳೆದ ೧೦ ವರ್ಷಗಳಲ್ಲಿ, ರಕ್ಷಣಾ ಉದ್ಯಮಗಳು ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ೩೦ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೊತ್ತವನ್ನು ಹೂಡಿಕೆ ಮಾಡಿವೆ. ಮುಂದಿನ ಐದು ವರ್ಷಗಳಲ್ಲಿ ಸುಮಾರು ೩೨ ಸಾವಿರ ಕೋಟಿ ರೂಪಾಯಿಗಳ ಯೋಜಿತ ವೆಚ್ಚದೊಂದಿಗೆ ಸಂಶೋಧನೆ ಮತ್ತು ಅಭಿವೃದ್ಧಿಯ ವೇಗವನ್ನು ಈಗ ದ್ವಿಗುಣಗೊಳಿಸಲು ಪ್ರಸ್ತಾಪಿಸಲಾಗಿದೆ.

***************

ಫಿಡೆ ಚೆಸ್ ವಿಶ್ವಕಪ್ ೨೦೨೫ ರಲ್ಲಿ, ಹೊವ್ಹನ್ನಿಸ್ಯಾನ್ ರಾಬರ್ಟ್ ವಿರುದ್ಧದ ಪಂದ್ಯದಲ್ಲಿ ಪ್ರಜ್ಞಾನಂದ ಗೆದ್ದು ನಾಲ್ಕನೇ ಸುತ್ತಿಗೆ ಪ್ರವೇಶಿಸಿದ್ದಾರೆ.

ಉಜ್ಬೇಕಿಸ್ತಾನದ ಶಮ್ಸಿದ್ದೀನ್ ವೊಖಿಡೋವ್ ಜೊತೆ ಡ್ರಾ ಮಾಡಿಕೊಂಡ ನಂತರ ಅರ್ಜುನ್ ಎರಿಗೈಸಿ ಕೂಡ ೪ನೇ ಸುತ್ತಿಗೆ ಅರ್ಹತೆ ಪಡೆದಿದ್ದಾರೆ. ಡ್ರಾ ಮಾಡಿಕೊಂಡ ನಂತರ ಪೆಂಟಾಲ ಹರಿಕೃಷ್ಣ ಮತ್ತು ಪ್ರಣವ್ ವಿ ಕೂಡ ೪ ನೇ ಸುತ್ತಿಗೆ ಲಗ್ಗೆ ಇಟ್ಟರು. ಏತನ್ಮಧ್ಯೆ, ಪಂದ್ಯಾವಳಿಯ ಅಗ್ರ ಶ್ರೇಯಾಂಕಿತ ಮತ್ತು ವಿಶ್ವ ಚಾಂಪಿಯನ್ ಗುಕೇಶ್, ಜರ್ಮನಿಯ ಫ್ರೆಡ್ರಿಕ್ ಸ್ವಾನೆ ವಿರುದ್ಧ ಸೋತರು. ಗೇಬ್ರಿಯಲ್ ಸರ್ಗಿಸಿಯನ್ ವಿರುದ್ಧ ಸೋತ ನಂತರ ದೀಪ್ತಾಯನ್ ಘೋಷ್, ಪಂದ್ಯಾವಳಿಯಿಂದ ನಿರ್ಗಮಿಸಿದರು. ಎಸ್.ಎಲ್.ನಾರಾಯಣನ್, ಚೀನಾದ ಯು ಯಾಂಗಿ ವಿರುದ್ಧ ಡ್ರಾ ಮಾಡಿಕೊಂಡರು. ವಿದಿತ್ ಗುಜರಾತಿ ಮತ್ತು ಕಾರ್ತಿಕ್ ವೆಂಕಟರಾಮನ್ ತಮ್ಮ ಪಂದ್ಯಗಳನ್ನು ಡ್ರಾ ಮಾಡಿಕೊಂಡರು. ಎಸ್.ಎಲ್.ನಾರಾಯಣನ್, ವಿದಿತ್ ಗುಜರಾತಿ ಮತ್ತು ಕಾರ್ತಿಕ್ ವೆಂಕಟರಾಮನ್ ಇಂದು ಟೈ-ಬ್ರೇಕ್ ಪಂದ್ಯದಲ್ಲಿ ಆಡಬೇಕಾಗಿದೆ.

******* ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ********

******* ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ********